**All India Radio: Bangalore**
**National Bulletin In Kannada**
**13.02.2025 07.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**13.02.2025 07.35 a.m.**

**<><><><>**

ಮುಖ್ಯಾಂಶಗಳು

1. ಫ್ರಾನ್ಸ್ ಪ್ರವಾಸ ಪೂರ್ಣಗೊಳಿಸಿ ಅಮೆರಿಕದ ವಾಷಿಂಗ್‌ಟನ್ ಡಿಸಿ ತಲುಪಿದ ಪ್ರಧಾನಿ ನರೇಂದ್ರ ಮೋದಿ
2. ಬೆಂಗಳೂರಿನ ಏರೋ ಇಂಡಿಯಾ ವೈಮಾನಿಕ ಪ್ರದರ್ಶನಕ್ಕೆ ಅಭೂತಪೂರ್ವ ಸ್ಪಂದನೆ - ರಕ್ಷಣಾ ಸಚಿವ ರಾಜನಾಥ್ ಸಿಂಗ್
3. ವಾಣಿಜ್ಯೋದ್ಯಮ ವಲಯಗಳಲ್ಲಿ ಕರ್ನಾಟಕಕ್ಕೆ ವಿಫುಲ ಅವಕಾಶ - ಸಚಿವ ಪಿಯೂಷ್ ಗೋಯಲ್
4. ಏಕದಿನ ಕ್ರಿಕೆಟ್ : ಇಂಗ್ಲೆಂಡ್ ವಿರುದ್ಧ ಭಾರತಕ್ಕೆ ೧೪೨ ರನ್‌ಗಳ ಭರ್ಜರಿ ಜಯ - ೩-೦ ಅಂತರದಿಂದ ಸರಣಿ ಕೈವಶ

**<><><><>**

ಪ್ರಧಾನಿ ನರೇಂದ್ರ ಮೋದಿ ಯಶಸ್ವಿಯಾಗಿ ಫ್ರಾನ್ಸ್ ಪ್ರವಾಸ ಪೂರ್ಣಗೊಳಿಸಿದ್ದು, ಅಮೆರಿಕದ ವಾಷಿಂಗ್‌ಟನ್ ಡಿಸಿ ತಲುಪಿದ್ದಾರೆ. ವಾಷಿಂಗ್‌ಟನ್ ಡಿಸಿಯಲ್ಲಿ ಪ್ರಧಾನಿಯವರಿಗೆ ಭವ್ಯ ಸ್ವಾಗತ ನೀಡಲಾಯಿತು. ನಂತರ ಅವರು, ವಾಷಿಂಗ್‌ಟನ್ ಡಿಸಿಯ ಬ್ಲೇರ್ ಹೌಸ್‌ಗೆ ತೆರಳಿದರು. ಇದೇ ಸಂದರ್ಭದಲ್ಲಿ ಅವರು, ಅಮೆರಿಕದ ರಾಷ್ಟ್ರೀಯ ಗುಪ್ತದಳದ ನಿಯೋಜಿತ ನಿರ್ದೇಶಕರಾದ ತುಳ್ಸಿ ಗಬ್ಬಾರ್ಡ್ ಅವರನ್ನು ಭೇಟಿ ಮಾಡಿದರು. ಇಂದು ಪ್ರಧಾನಿಯವರು, ಉದ್ಯಮಿ ಎಲಾನ್ ಮಸ್ಕ್ ಅವರನ್ನು ಶ್ವೇತಭವನದಲ್ಲಿ ಭೇಟಿಯಾಗಲಿದ್ದಾರೆ. ಫ್ರಾನ್ಸ್ ಭೇಟಿಯಿಂದ ಉಭಯ ದೇಶಗಳ ನಡುವೆ ರಕ್ಷಣೆ, ತಂತ್ರಜ್ಞಾನ, ವ್ಯಾಪಾರ ಮತ್ತು ಜಾಗತಿಕ ಸಹಕಾರ ವಲಯದಲ್ಲಿ ಮಹತ್ವದ ಸಹಭಾಗಿತ್ವಕ್ಕೆ ನಾಂದಿಯಾಗಿದೆ. ಫ್ರಾನ್ಸ್‌ನ ಐತಿಹಾಸಿಕ ನಗರ ಮಾರ್ಸಿಲ್ಲೆಯಲ್ಲಿ ನಿನ್ನೆ ಭಾರತದ ಮೊದಲ ದೂತವಾಸ ಕಚೇರಿಯನ್ನು ಪ್ರಧಾನಿ ನರೇಂದ್ರ ಮೋದಿ ಮತ್ತು ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯಲ್ ಮ್ಯಾಕ್ರನ್ ಜಂಟಿಯಾಗಿ ಉದ್ಘಾಟಿಸಿದರು. ಇದಕ್ಕೂ ಮುನ್ನ ಉಭಯ ನಾಯಕರು ಅನಿವಾಸಿ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಿದರು. ಬಳಿಕ, ಕ್ಯಾಡರಾಚೆಯಲ್ಲಿರುವ ಅಂತಾರಾಷ್ಟ್ರೀಯ ಥರ್ಮೋನ್ಯೂಕ್ಲಿಯಾರ್ ಪ್ರಾಯೋಗಿಕ ರಿಯಾಕ್ಟರ್ - ಐಟಿಇಆರ್‌ಗೆ ಭೇಟಿ ನೀಡಿದರು. ನಂತರ ಮರ್ಜಲ್ಸ್ ಯುದ್ಧ ಸ್ಮಾರಕಕ್ಕೆ ತೆರಳಿ, ಮೊದಲನೇ ಮತ್ತು ೨ನೇ ಮಹಾ ಯುದ್ಧದಲ್ಲಿ ಪ್ರಾಣ ತ್ಯಾಗ ಮಾಡಿದ ಭಾರತೀಯ ಸೈನಿಕರಿಗೆ ಗೌರವ ನಮನ ಸಲ್ಲಿಸಿದರು.

**<><><><>**

ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆ ಯೋಜನೆಯಾದ 'ಪ್ರಧಾನ ಮಂತ್ರಿ ಸೂರ್ಯಘರ್ ಉಚಿತ ವಿದ್ಯುತ್ ಯೋಜನೆ' ಗೆ ಇಂದು ಒಂದು ವರ್ಷ ತುಂಬಿದೆ. ಈ ಹಿನ್ನೆಲೆಯಲ್ಲಿ ೨೦೨೭ರ ವೇಳೆಗೆ ದೇಶದಲ್ಲಿ ಒಂದು ಕೋಟಿ ಮನೆಗಳಿಗೆ ಸೌರಶಕ್ತಿಯ ಮೂಲಕ ಬೆಳಕು ನೀಡುವ ಗುರಿ ಹೊಂದಲಾಗಿದೆ. ದೇಶದ ಪ್ರತಿ ನಾಗರಿಕರಿಗೆ ಸೌರಶಕ್ತಿ ಕೈಗೆಟಕುವ ರೀತಿಯಲ್ಲಿ ಯೋಜನೆ ರೂಪಿಸಿರುವ ಕೇಂದ್ರ ಸರ್ಕಾರ ಇದೀಗ ಸೂರ್ಯ ಘರ್ ಮೂಲಕ ಸುಸ್ಥಿರ ಭವಿಷ್ಯಕ್ಕೆ ಭದ್ರ ಬುನಾದಿ ಹಾಕುವಲ್ಲಿ ನಿರತವಾಗಿದೆ.

೨೦೨೪ರ ಫೆಬ್ರುವರಿ ೧೩ರಂದು ಪ್ರಧಾನಿ ನರೇಂದ್ರ ಮೋದಿ ಅವರು ಪ್ರಾರಂಭಿಸಿದ ಈ ಪರಿವರ್ತನಾಶೀಲ ಯೋಜನೆ ಮನೆ ಮೇಲ್ಛಾವಣಿಗೆ ಸೌರಫಲಕ ಸ್ಥಾಪಿಸಿ ಉಚಿತ ವಿದ್ಯುತ್ ಒದಗಿಸುವ ಜೊತೆಗೆ ವಿದ್ಯುತ್ ಸ್ವಾವಲಂಬನೆ ಕಡೆಗೆ ಕೇಂದ್ರ ಸರ್ಕಾರ ಹೆಜ್ಜೆ ಇಟ್ಟಿದೆ. ಯೋಜನೆ ಪ್ರಾರಂಭವಾದ ಮೊದಲ ವರ್ಷದಲ್ಲೇ ಇದುವರೆಗೂ ೯ ಲಕ್ಷದ ೪ ಸಾವಿರದ ೮೨೩ ಮನೆಗಳಿಗೆ ಮೇಲ್ಛಾವಣಿ ಸೌರಶಕ್ತಿ ಘಟಕ ಅಳವಡಿಸಲಾಗಿದೆ. ಈ ಯೋಜನೆಯಡಿ ೩೦ ಗಿಗಾವ್ಯಾಟ್ ಸೌರಶಕ್ತಿ ಸಾಮರ್ಥ್ಯ ಹೊಂದುವ ನಿರೀಕ್ಷೆಯಿದೆ. ಜೊತೆಗೆ ಭಾರತದ ನವೀಕರಿಸಬಹುದಾದ ಇಂಧನ ಗುರಿಗೆ ಗಮನಾರ್ಹ ಕೊಡುಗೆ ನೀಡಲಿದೆ. ಪಿಎಂ ಸೂರ್ಯಘರ್ ಯೋಜನೆಯು ವಿವಿಧ ವಲಯಗಳಲ್ಲಿ ಸುಮಾರು ೧೭ ಲಕ್ಷ ನೇರ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದ್ದು, ದೇಶದಲ್ಲಿ ಉದ್ಯೋಗ ಮತ್ತು ಆರ್ಥಿಕ ಬೆಳವಣಿಗೆಯಲ್ಲಿ ಮಹತ್ವದ ಪಾತ್ರ ವಹಿಸಲಿದೆ. ಬರುವ ೨೦೨೭ರಲ್ಲಿ ಒಂದು ಕೋಟಿ ಮನೆಗಳಿಗೆ ಸೌರ ವಿದ್ಯುತ್ ಒದಗಿಸುವ ಗುರಿ ನಿಗದಿ ಮಾಡಲಾಗಿದೆ.

<><><><>

ರಕ್ಷಣಾ ಉತ್ಪನ್ನಗಳನ್ನು ದೇಶೀಯವಾಗಿ ಉತ್ಪಾದನೆ ಮಾಡುತ್ತಿದ್ದು, ಭಾರತ ಹೊಸ ಮೈಲಿಗಲ್ಲನ್ನೇ ಸೃಷ್ಟಿಸಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಬೆಂಗಳೂರಿನ ಯಲಹಂಕದ ವಾಯು ನೆಲೆಯಲ್ಲಿ ಆಯೋಜಿಸಿರುವ ಏರೋ ಇಂಡಿಯಾ - ೨೦೨೫ರ ಸಮಾರಂಭದಲ್ಲಿ ನಿನ್ನೆ ಮಾತನಾಡಿದ ಅವರು, ಒಂದು ದಶಕದ ಹಿಂದೆ ಶೇಕಡ ೬೫-೭೦ ರಷ್ಟು ರಕ್ಷಣಾ ಉತ್ಪನ್ನಗಳನ್ನು ಆಮದು ಮಾಡಿಕೊಳ್ಳುತ್ತಿದ್ದು, ಈಗ ದೇಶೀಯವಾಗಿ ಶೇಕಡ ೬೫-೭೦ ರಷ್ಟು ಉತ್ಪನ್ನಗಳನ್ನು ಉತ್ಪಾದಿಸುತ್ತಿದ್ದೇವೆ. ಪ್ರಧಾನಿ ನರೇಂದ್ರ ಮೋದಿ ಅವರ ಸ್ವಾವಲಂಬಿ ಭಾರತದ ಪರಿಕಲ್ಪನೆಯನ್ನು ಸಾಕಾರಗೊಳಿಸಿದ್ದೇವೆ ಎಂದು ತಿಳಿಸಿದರು. ಏರೋ ಇಂಡಿಯಾ - ೨೦೨೫ ಅಗಾಧ ಶಕ್ತಿ ಹಾಗೂ ಸ್ಫೂರ್ತಿಯನ್ನು ತಂದಿದೆ. ಇದರಿಂದ ಉದ್ದಿಮೆಗಳು, ನವೋದ್ಯಮ ಕಂಪನಿಗಳು ಮುಂತಾದವುಗಳಿಗೆ ಪ್ರೋತ್ಸಾಹ ದೊರೆತಂತಾಗಿದೆ. ರಕ್ಷಣಾ ಉತ್ಪನ್ನಗಳನ್ನು ಇದೀಗ ವಿದೇಶಗಳಿಗೂ ರಫ್ತು ಮಾಡಲಾಗುತ್ತಿದೆ. ಈ ವಲಯದಲ್ಲಿ ಖಾಸಗಿ ಸಹಭಾಗಿತ್ವದಲ್ಲಿ ನಾವು ಇನ್ನೂ ಹೆಚ್ಚು ಸಾಧನೆ ಮಾಡಬೇಕಿದೆ. ಹೆಚ್ಚು ಜನ ಭಾಗೀದಾರರನ್ನು ಆಕರ್ಷಿಸುವ ರೀತಿಯಲ್ಲಿ ಮುನ್ನಡೆಯಬೇಕು. ದೇಶದಲ್ಲಿ ತಮ್ಮ ಜೀವದ ಹಂಗು ತೊರೆದು ದೇಶ ಕಾಯುವ ಸೈನಿಕರನ್ನು ನಾವು ಸಶಕ್ತಗೊಳಿಸಬೇಕು ಎಂದು ತಿಳಿಸಿದರು. ಏರೋ ಇಂಡಿಯಾ - ೨೦೨೫ ಹಲವು ಕಂಪನಿಗಳು, ಪ್ರಮುಖ ಸಂಸ್ಥೆಗಳು, ಕೈಗಾರಿಕೆಗಳನ್ನು ಒಗ್ಗೂಡಿಸುವ ಪ್ರಯತ್ನ ಮಾಡಿದೆ. ವಿವಿಧ ದೇಶಗಳ ರಕ್ಷಣಾ ಸಚಿವರು, ವಿವಿಧ ಕಂಪನಿ ಮುಖ್ಯಸ್ಥರ ಸಮಾವೇಶಗಳು ಇದಕ್ಕೆ ಹೊಸ ಆಯಾಮ ನೀಡಿದೆ. ಆದರೂ ನಾವು ಮಾಡಬೇಕಾದ ಕೆಲಸ ಬಹಳಷ್ಟಿದೆ. ಇಲ್ಲಿ ಹಲವು ದೇಶಗಳು, ಪ್ರದರ್ಶಕರು, ಗಣ್ಯರುಗಳು ಭಾಗವಹಿಸಿ ಸಮಾವೇಶಕ್ಕೆ ಮೆರಗು ನೀಡಿದ್ದಾರೆ. ಇದರಿಂದ ನಮ್ಮ ಸಾಮರ್ಥ್ಯವನ್ನು ದೇಶ ವಿದೇಶಗಳ ಎದರು ತೋರಿಸಿದಂತಾಗಿದೆ. ನಾವು ಜಾಗತಿಕ ನಾಯಕನ ಪಟ್ಟ ಏರುವುದರಲ್ಲಿ ಸಂಶಯವಿಲ್ಲ ಎಂದು ಸಚಿವ ರಾಜನಾಥ್ ಸಿಂಗ್ ತಿಳಿಸಿದರು. ಏರೋ ಇಂಡಿಯಾ ಪ್ರದರ್ಶನ ವೈಯಕ್ತಿವಾಗಿ ಬಹಳ ಹುರುಪು ನೀಡಿದೆ. ಇಸ್ರೋ, ಹೆಚ್.ಎ.ಎಲ್, ಡಿ.ಆರ್.ಡಿ.ಓ ಮುಂತಾದ ಸಂಸ್ಥೆಗಳ ಸಹಕಾರದಿಂದ ನಾವು ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಸಾಧನೆ ಮಾಡುತ್ತೇವೆ ಎಂದು ತಿಳಿಸಿದರು.

<><><><>

ರಾಜ್ಯಗಳ ಪ್ರಗತಿಯೇ ದೇಶದ ಅಭಿವೃದ್ಧಿಯಾಗಿದ್ದು, ಕೇಂದ್ರ ಮತ್ತು ರಾಜ್ಯ ಸರಕಾರಗಳು ಸಹಭಾಗಿತ್ವ ಹಾಗೂ ಸಹಕಾರ ತತ್ತ್ವದ ಮೇಲೆ ಕೆಲಸ ಮಾಡಿದರೆ ಭಾರತ ೨೦೪೭ರ ಹೊತ್ತಿಗೆ ೩೦ ಟ್ರಿಲಿಯನ್ ಡಾಲರ್ ಮೌಲ್ಯದ ಆರ್ಥಿಕತೆಯಾಗಿ ಬೆಳೆಯಲಿದೆ. ಈ ವಿಚಾರದಲ್ಲಿ ಕೇಂದ್ರ ಸರಕಾರವು ಕರ್ನಾಟಕಕ್ಕೆ ಸಂಪೂರ್ಣ ಸಹಕಾರ ನೀಡಲಿದೆ ಎಂದು ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್

ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಜಾಗತಿಕ ಹೂಡಿಕೆದಾರರ ಸಮಾವೇಶದಲ್ಲಿ ರಾಜ್ಯದ ಆರ್ಥಿಕತೆ ಮತ್ತು ಕೈಗಾರಿಕಾ ರಂಗದ ಬೆಳವಣಿಗೆಗೆ ಮಹತ್ತರ ಕೊಡುಗೆ ನೀಡುತ್ತಿರುವ ೧೫ ಉದ್ಯಮಗಳಿಗೆ 'ಇನ್ವೆಸ್ಟ್ ಕರ್ನಾಟಕ' ಪ್ರಶಸ್ತಿ ಪ್ರದಾನ ಮಾಡಿ ರಾಜ್ಯದ ಕೈಗಾರಿಕಾ ಯಶೋಗಾಥೆಗಳ ಸಂಪುಟವನ್ನು ಬಿಡುಗಡೆ ಮಾಡಿದರು. ಕಳೆದ ವರ್ಷ ಮೂಲಸೌಕರ್ಯ ಅಭಿವೃದ್ಧಿಗೆ ೧೧ ಲಕ್ಷ ಕೋಟಿ ರೂಪಾಯಿ ವಿನಿಯೋಗಿಸಲಾಗಿದೆ. ತುಮಕೂರಿನಲ್ಲಿ ೮ ಸಾವಿರ ಎಕರೆ ವಿಸ್ತೀರ್ಣದಲ್ಲಿ ಪ್ಲೇ ಅಂಡ್ ಪ್ಲಗ್ ಮಾದರಿಯಲ್ಲಿ ಕೈಗಾರಿಕಾ ಸ್ಮಾರ್ಟ್ ಸಿಟಿಗೆ ಚಾಲನೆ ನೀಡಲಾಗಿದೆ. ೧ ಸಾವಿರದ ೭೩೬ ಎಕರೆಯಲ್ಲಿ ಇದರ ಮೊದಲ ಹಂತದ ಅಭಿವೃದ್ಧಿ ಪ್ರಗತಿಯಲ್ಲಿದ್ದು, ೨೦೨೬ರ ಕೊನೆಯ ವೇಳೆಗೆ ಈ ಯೋಜನೆ ಪೂರ್ಣಗೊಳಿಸಲಾಗುವುದು ಎಂದರು. ಇಡೀ ಜಗತ್ತಿನಲ್ಲಿ ಭಾರತವು ಬಂಡವಾಳ ಹೂಡಿಕೆಗೆ ಪ್ರಶಸ್ತ ತಾಣವಾಗಿದೆ. ನಮ್ಮಲ್ಲಿರುವ ಪ್ರಜಾಸತ್ತೆ, ಬೇಡಿಕೆ, ಜನಸಂಖ್ಯೆ, ಡಿಜಿಟಲೀಕರಣ ಮತ್ತು ವೈವಿಧ್ಯಗಳೇ ಭಾರತದ ಐದು ಶಕ್ತಿಗಳಾಗಿವೆ. ಸದ್ಯದಲ್ಲೇ ದೇಶದಲ್ಲಿ ಇನ್ನೂ ೭೫ ನೂತನ ವಿಮಾನ ನಿಲ್ದಾಣಗಳು, ೧೨೦ ನಗರಗಳಿಗೆ ಉಡಾನ್-೨ ಅಡಿಯಲ್ಲಿ ವಿಮಾನ ಸಂಪರ್ಕ, ೧೧೪ ಜಲಮಾರ್ಗಗಳು, ಈಗಿರುವ ಬಂದರುಗಳ ಸಂಖ್ಯೆಯನ್ನು ದುಪ್ಪಟ್ಟು ಮಾಡುವ ಜೊತೆಗೆ ೫೦ ಪ್ರವಾಸಿ ತಾಣಗಳನ್ನು ಅಭಿವೃದ್ಧಿಗೊಳಿಸಲಾಗುವುದು ಎಂದರು.

ಭಾರತದ ರಫ್ತು ವಹಿವಾಟು ಇದೀಗ ೮೦೦ ಶತಕೋಟಿ ಡಾಲರ್ ತಲುಪಿದ್ದು, ಇದರಲ್ಲಿ ಕರ್ನಾಟಕ ಸಿಂಹಪಾಲು ಹೊಂದಿದೆ. ಕೇಂದ್ರ ಸರಕಾರವು ನಾವೀನ್ಯತೆಗೆ ೨೦ ಸಾವಿರ ಕೋಟಿ ರೂಪಾಯಿ ಸೆಮಿಕಾನ್ ಮಿಷನ್‌ಗೆ ೭೪ ಸಾವಿರ ಕೋಟಿ ರೂಪಾಯಿ ಮತ್ತು ಕೈಗಾರಿಕೆಗಳಿಗೆ ಪಿಎಲ್‌ಐ ಆಧರಿತ ಪ್ರೋತ್ಸಾಹಕ್ಕೆ ೨ ಲಕ್ಷ ಕೋಟಿ ರೂಪಾಯಿ ಮೀಸಲಿಟ್ಟಿದೆ. ಕರ್ನಾಟಕದಲ್ಲಿ ಮುಂದಿನ ದಿನಗಳಲ್ಲಿ ಡೀಪ್-ಟೆಕ್, ಫಿನ್-ಟೆಕ್, ಫ್ಯೂಚರ್ ಇಂಡಸ್ಟ್ರಿಗಳಿಗೆ ಸಮೃದ್ಧ ಅವಕಾಶಗಳಿದ್ದು, ದೇಶವನ್ನು ಮುನ್ನಡೆಸಲಿದೆ ಎಂದು ಗೋಯಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><><><>

ಇಂದು ವಿಶ್ವ ರೇಡಿಯೋ ದಿನ. ಪ್ರತಿ ವರ್ಷ ಫೆಬ್ರುವರಿ ೧೩ ರಂದು, ರೇಡಿಯೊದ ಮಹತ್ವದ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ರೇಡಿಯೊ ಮಾಹಿತಿ, ಮನೋರಂಜನೆ ಮತ್ತು ಶಿಕ್ಷಣ ನೀಡುವ ಮಾಧ್ಯಮವಾಗಿದೆ. ರೇಡಿಯೊ ಜನರ ಜೀವನವನ್ನು ಸ್ಪರ್ಶಿಸುವ ಮತ್ತು ಜಗತ್ತಿನ ಮೂಲೆ ಮೂಲೆಯಿಂದ ಶ್ರೋತೃಗಳನ್ನು ಒಟ್ಟುಗೂಡಿಸುವ ವಿಶಿಷ್ಟ ಶಕ್ತಿ ಹೊಂದಿದೆ. ಈ ವರ್ಷದ ವಿಶ್ವ ರೇಡಿಯೋ ದಿನದ ವಿಷಯ - ರೇಡಿಯೋ ಮತ್ತು ಹವಾಮಾನ ಬದಲಾವಣೆ ಎಂಬುದಾಗಿದೆ. ವಿಶ್ವ ರೇಡಿಯೋ ದಿನದ ಸಂದೇಶದಲ್ಲಿ, ಯುನೆಸ್ಕೋದ ಮಹಾನಿರ್ದೇಶಕಿ ಆಡ್ರೆ ಅಜೌಲೆ, ವಿಶ್ವ ರೇಡಿಯೋ ದಿನವು ಶಾಶ್ವತ, ಬಹುಮುಖ ಮತ್ತು ವ್ಯಾಪಕವಾಗಿ ಹರಡಿರುವ ಸಂವಹನ ಸಾಧನವನ್ನು ಆಚರಿಸಲು ಒಂದು ಅವಕಾಶವಾಗಿದೆ. ವೇಗವಾಗಿ ಬದಲಾಗುತ್ತಿರುವ ಜಗತ್ತಿನಲ್ಲಿ ಹವಾಮಾನ ವೈಪರೀತ್ಯದ ಪರಿಣಾಮಗಳಿಗೆ ಹೊಂದಿಕೊಳ್ಳಲು ಮತ್ತು ಇವುಗಳ ಪರಿಣಾಮ ತಗ್ಗಿಸಲು ರೇಡಿಯೋ ಒಂದು ಸಾಧನವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದ್ದಾರೆ. ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್, ಸುದ್ದಿ ಮತ್ತು ಮಾಹಿತಿಯ ಪ್ರಸರಣದ ಮೂಲಕ, ರಾಷ್ಟ್ರದ ಸಾಂಸ್ಕೃತಿಕ ಮತ್ತು ಆರ್ಥಿಕ ಅಭಿವೃದ್ಧಿಯಲ್ಲಿ ರೇಡಿಯೋ ಪ್ರಮುಖ ಪಾತ್ರ ವಹಿಸುತ್ತದೆ. "ಬಹುಜನ ಹಿತಾಯ ಬಹುಜನ ಸುಖಾಯ" ಎಂಬ ಧ್ಯೇಯವಾಕ್ಯದೊಂದಿಗೆ, ವಿಶ್ವದ ಅತಿದೊಡ್ಡ ರೇಡಿಯೋ ಜಾಲವಾದ ಆಕಾಶವಾಣಿ ದೇಶದ ಜನರ ಮನಸ್ಸನ್ನು ತಲುಪುತ್ತಿದೆ ಎಂದು ಅವರು ಹೇಳಿದರು. ಪ್ರಸಾರ ಭಾರತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗೌರವ್ ದ್ವಿವೇದಿ ತಮ್ಮ ಸಂದೇಶದಲ್ಲಿ, ಆಕಾಶವಾಣಿ ಭಾರತದ ಶ್ರೀಮಂತ ಸಂಸ್ಕೃತಿ ಮತ್ತು ಸಂಪ್ರದಾಯಗಳ ವಾಹಕವಾಗಿದೆ. ಇದು ಭಾರತದ ವೈಜ್ಞಾನಿಕ ಪ್ರಗತಿಯ ಪ್ರಯಾಣದೊಂದಿಗೆ ಜನರನ್ನು ಸಂಪರ್ಕಿಸುತ್ತಿದೆ ಎಂದು ಹೇಳಿದರು. ವಿಶ್ವ ರೇಡಿಯೋ ದಿನದಂದು

ಶುಭಾಶಯಗಳನ್ನು ತಿಳಿಸಿದ ಆಕಾಶವಾಣಿಯ ಮಹಾನಿರ್ದೇಶಕಿ ಡಾ. ಪ್ರಜ್ಞಾ ಪಲಿವಾಲ್ ಗೌರ್, ಸುಮಾರು ಒಂಭತ್ತು ದಶಕಗಳಿಂದ ಆಕಾಶವಾಣಿ - ಮಾಹಿತಿ, ಶಿಕ್ಷಣ ಮತ್ತು ಮನರಂಜನೆಯೊಂದಿಗೆ ಕೇಳುಗರನ್ನು ಮನವನ್ನು ತಲುಪುತ್ತಿದೆ ಎಂದು ಹೇಳಿದರು.

ಧ್ವನಿ : ಮಹಾನಿರ್ದೇಶಕಿ ಡಾ. ಪ್ರಜ್ಞಾ ಪಲಿವಾಲ್ ಗೌರ್ (೧೯ ಸೆಕೆಂಡ್ಸ್)

**<><><>**

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ೩ ಪಂದ್ಯಗಳ ಏಕದಿನ ಸರಣಿಯ ಅಂತಿಮ ಪಂದ್ಯದಲ್ಲಿ ಭಾರತ, ಇಂಗ್ಲೆಂಡ್ ವಿರುದ್ಧ ೧೪೨ ರನ್‌ಗಳ ಭರ್ಜರಿ ಜಯ ದಾಖಲಿಸಿದೆ. ಈ ಮೂಲಕ ಸರಣಿಯನ್ನು ೩-೦ ಅಂತರದಲ್ಲಿ ಕ್ಲೀನ್‌ಸ್ವೀಪ್ ಮಾಡಿದೆ.

**<><>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<><>**